**Akashvani : Bangalore**
**Regional Bulletin In Kannada**
**21.06.2026 / 18.40 hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

೧. ಯೋಗವು ಆರೋಗ್ಯಕರ, ಸಮತೋಲಿತ ಜೀವನಕ್ಕೆ ಅತ್ಯಂತ ವಿಶ್ವಾಸಾರ್ಹ ಮಾರ್ಗ - ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್

೨. ದೈಹಿಕ, ಮಾನಸಿಕ ಒತ್ತಡದಿಂದ ಮುಕ್ತರಾಗಲು ಯೋಗ ಅವಶ್ಯಕ - ಕೇಂದ್ರ ಸಚಿವ ವಿ.ಸೋಮಣ್ಣ

೩. ಬೆಂಗಳೂರಿನ ಕುಡಿಯುವ ನೀರಿಗಾಗಿ ಮೇಕೆದಾಟು ಯೋಜನೆ ಅಗತ್ಯ - ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ

೪. ರಾಜ್ಯದ ಐವರಿಗೆ ಇದೇ ಮಂಗಳವಾರ ರಾಷ್ಟ್ರಪತಿ ಅವರಿಂದ ಪದ್ಮಶ್ರೀ ಪ್ರಶಸ್ತಿ ಪ್ರದಾನ

೫. ರಾಜ್ಯದೆಲ್ಲೆಡೆ ಬಿಗಿ ಭದ್ರತೆ ನಡುವೆ ಸುಗಮವಾಗಿ ನಡೆದ ನೀಟ್-ಯುಜಿ ಮರುಪರೀಕ್ಷೆ

---

ವಿಶ್ವಾದ್ಯಂತ ಇಂದು ೧೨ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಆಚರಿಸಲಾಯಿತು. 'ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ' ಈ ವರ್ಷದ ಧ್ಯೇಯವಾಕ್ಯದೊಂದಿಗೆ ಎಲ್ಲೆಡೆ ಯೋಗಾಸನ ಪ್ರದರ್ಶನದೊಂದಿಗೆ ಅದರ ಮಹತ್ವವನ್ನು ತಿಳಿಸಲಾಯಿತು.

ಆಯುಷ್ ಇಲಾಖೆ ವತಿಯಿಂದ ಬೆಂಗಳೂರಿನ ವಿಧಾನಸೌಧದ ಮುಂಭಾಗದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಭಾಗವಹಿಸಿ ಯೋಗಾಭ್ಯಾಸ ಮಾಡಿದರು.

ಬಳಿಕ ಮಾತನಾಡಿದ ಅವರು, ಭಾರತದ ಪ್ರಾಚೀನ ಸಂಪ್ರದಾಯದ ಅಮೂಲ್ಯ ಕೊಡುಗೆಯಾದ ಯೋಗವು ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಉತ್ತೇಜಿಸುವ ಅತ್ಯಂತ ವಿಶ್ವಾಸಾರ್ಹ ಸಾಧನವಾಗಿದೆ ಎಂದರು. ಇಂದಿನ ಸ್ಪರ್ಧಾತ್ಮಕ ಮತ್ತು ಒತ್ತಡ ಜೀವನಶೈಲಿಯು ಅನೇಕ ದೈಹಿಕ ಮತ್ತು ಮಾನಸಿಕ ಸವಾಲುಗಳನ್ನು ಸೃಷ್ಟಿಸಿದ್ದು, ಯೋಗವು ಆರೋಗ್ಯಕರ ದೇಹ, ಶಾಂತ ಮನಸ್ಸು ಮತ್ತು ಸಕಾರಾತ್ಮಕ ದೃಷ್ಟಿಕೋನವನ್ನು ಒದಗಿಸುತ್ತದೆ ಎಂದು ಹೇಳಿದರು.

ಯೋಗ, ಪ್ರಾಣಾಯಮ ಮತ್ತು ಧ್ಯಾನವನ್ನು ನಮ್ಮ ದೈನಂದಿನ ಜೀವನದ ಅವಿಭಾಜ್ಯ ಅಂಗವನ್ನಾಗಿ ಮಾಡಿಕೊಳ್ಳಬೇಕಾದ ಅಗತ್ಯವಿದ್ದು, ಪ್ರತಿದಿನ ಕೆಲವೇ ನಿಮಿಷಗಳ ಯೋಗಾಭ್ಯಾಸವು ಅನೇಕ ರೋಗಗಳಿಂದ ರಕ್ಷಿಸಿ ಹೊಸ ಚೈತನ್ಯವನ್ನು ತುಂಬುತ್ತದೆ ಎಂದರು. ಈ ವೇಳೆ ಸಚಿವರಾದ ಯು.ಟಿ.ಖಾದರ್ ಮತ್ತಿತರರು ಉಪಸ್ಥಿತರಿದ್ದರು.

---

ದೈಹಿಕ, ಮಾನಸಿಕ ಒತ್ತಡದಿಂದ ಹೊರಬರಲು ಯೋಗ ಅತ್ಯಂತ ಅವಶ್ಯಕವಾಗಿದೆ ಎಂದು ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ಸಚಿವ ವಿ.ಸೋಮಣ್ಣ ಅಭಿಪ್ರಾಯಪಟ್ಟಿದ್ದಾರೆ.

ತುಮಕೂರಿನಲ್ಲಿ ಇಂದು ಆಯೋಜಿಸಿದ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪ್ರಸ್ತುತ ವಿವಿಧ ಕಾರಣಗಳಿಂದ ಜನರು ಮಾನಸಿಕ ಒತ್ತಡಗಳಿಂದ ಬಳಲುತ್ತಿದ್ದಾರೆ,

ಅತಿಯಾದ ಮೊಬೈಲ್ ಅವಲಂಬನೆಯಿಂದಾಗಿ ಖಿನ್ನತೆಗೆ ಒಳಗಾಗಿ ಆರೋಗ್ಯ ಸಮಸ್ಯೆ ಎದುರಿಸುತ್ತಿದ್ದಾರೆ. ಇಂತಹ ಸಮಸ್ಯೆಗಳಿಗೆ ಯೋಗ ಒಂದೇ ಪರಿಹಾರವಾಗಿದೆ ಎಂದರು.

ಯೋಗ ಕೇವಲ ಒಂದು ದಿನ ಆಚರಣೆಗೆ ಸೀಮಿತವಾಗದೆ ಜನರ ಬದುಕಿನ ಭಾಗವಾಗಬೇಕು ಎಂದು ಅವರು ಕರೆ ನೀಡಿದ್ದಾರೆ.

---

೧೨ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ರಾಜ್ಯದ ವಿವಿಧೆಡೆ ಇಂದು ಆಚರಿಸಲಾಯಿತು.

ಗದಗದಲ್ಲಿ ಜಿಲ್ಲಾ ಆಯುಷ್ ಇಲಾಖೆ, ಜಿಲ್ಲಾಡಳಿತ ವತಿಯಿಂದ ಜರುಗಿದ ಯೋಗ ದಿನಾಚರಣೆಯ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ವಿಧಾನ ಪರಿಷತ್ ಸದಸ್ಯ ಎಸ್ ವ್ಹಿ ಸಂಕನೂರ, ಯೋಗದಿಂದ ಆರೋಗ್ಯಕರ ಜೀವನ ರೂಪಿಸಿಕೊಳ್ಳಲು ಸಾಧ್ಯವೆಂದು ತಿಳಿಸಿದರು.

ಚಿತ್ರದುರ್ಗದಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ಶ್ರೀ ಕೆ.ಎಸ್.ನವೀನ್ ಪಾಲ್ಗೊಂಡರು. ಯೋಗದಿಂದ ವೈಯಕ್ತಿಕ ಆರೋಗ್ಯದ ಜೊತೆಗೆ, ರೋಗ ಮುಕ್ತ ಸಮಾಜ ನಿರ್ಮಾಣ ಸಾಧ್ಯ ಎಂದು ಹೇಳಿದರು.

ಆರೋಗ್ಯಕರ ಜೀವನಕ್ಕಾಗಿ ನಿತ್ಯ ಯೋಗಾಭ್ಯಾಸವನ್ನು ಅಳವಡಿಸಿಕೊಳ್ಳಬೇಕು ಎಂದು ದಾವಣಗೆರೆ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಕರೆ ನೀಡಿದರು.

ಕಾರವಾರದಲ್ಲಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ, ಪ್ರತಿದಿನ ಯೋಗ ಅಭ್ಯಾಸ ಮಾಡುವುದರಿಂದ ಮನಸ್ಸಿನಲ್ಲಿ ಸಕಾರಾತ್ಮಕ ಚಿಂತನೆಗಳು ಮೂಡಲಿವೆ ಎಂದು ತಿಳಿಸಿದರು.

ವಿಜಯಪುರದಲ್ಲಿ ಯೋಗ ಕಾರ್ಯಕ್ರಮದಲ್ಲಿ ಮಾತನಾಡಿದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಹರೀಶ ಎ. ಯೋಗ ಮಾಡುವುದರಿಂದ ದೇಹ ಮತ್ತು ಮನಸ್ಸು ಒಗ್ಗೂಡುತ್ತದೆ. ನಿತ್ಯ ಯೋಗ ಮಾಡುವುದರಿಂದ ಆರೋಗ್ಯ ಸುಧಾರಿಸಿಕೊಳ್ಳುವುದಲ್ಲದೆ, ಸದೃಢರಾಗಿ ಇರಬಹುದಾಗಿದೆ ಹೇಳಿದ್ದಾರೆ.

ಯಾದಗಿರಿಯಲ್ಲಿ ಅಪರ ಜಿಲ್ಲಾಧಿಕಾರಿ ರಮೇಶ್ ಕೋಲಾರ ಮಾತನಾಡಿ, ಆರೋಗ್ಯಕರ ಜೀವನಶೈಲಿ ಮತ್ತು ದೀರ್ಘಾಯುಷ್ಯಕ್ಕಾಗಿ ಯೋಗ ಅತ್ಯುತ್ತಮ ಸಾಧನವಾಗಿದ್ದು, ನಿಯಮಿತ ಯೋಗಾಭ್ಯಾಸವು ದೈಹಿಕ ಹಾಗೂ ಮಾನಸಿಕ ಆರೋಗ್ಯವನ್ನು ಸದೃಢಗೊಳಿಸುತ್ತದೆ ಎಂದು ತಿಳಿಸಿದ್ದಾರೆ.

ಹಾವೇರಿಯಲ್ಲಿ ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಯಶೋಧ ವಂಟಗೋಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ದಲ್ಜೀತ್ ಕುಮಾರ ಮತ್ತಿತರ ಅಧಿಕಾರಿಗಳು, ವಿದ್ಯಾರ್ಥಿಗಳು, ಸಾರ್ವಜನಿಕರು ಹಾಗೂ ಯೋಗಪಟುಗಳು ವಿವಿಧ ಆಸನಗಳ ಪ್ರದರ್ಶನದ ಮೂಲಕ ಯೋಗ ದಿನಾಚರಣೆಯಲ್ಲಿ ಭಾಗಿಯಾದರು.

ಚಾಮರಾಜನಗರದಲ್ಲಿ ಯೋಗ ದಿನಾಚರಣೆ ಉದ್ಘಾಟಿಸಿದ ಜಿಲ್ಲಾಧಿಕಾರಿ ಶ್ರೀರೂಪಾ, ಭಾರತ ಯೋಗ ಪರಂಪರೆಯ ದೇಶವಾಗಿದ್ದು ಯೋಗದಿಂದ ದೈಹಿಕ ಹಾಗೂ ಮಾನಸಿಕ ಆರೋಗ್ಯ ಸಿಗಲಿದೆ ಎಂದು ತಿಳಿಸಿದರು.

ಕೊಪ್ಪಳದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಸಂಸದ ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಮನುಷ್ಯನ ದೇಹ ಮತ್ತು ಮನಸ್ಸನ್ನು ಒಂದಾಗಿಸಿ ಪ್ರಕೃತಿಯೊಂದಿಗೆ ಜೋಡಿಸುವ ಮಹಾನ್ ಶಕ್ತಿ ಯೋಗಕ್ಕಿದೆ ಎಂದು ತಿಳಿಸಿದ್ದಾರೆ.

ಚಿಕ್ಕಬಳ್ಳಾಪುರದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಜಿ.ಪ್ರಭು, ಉತ್ತಮ ಮಾನಸಿಕ ಮತ್ತು ದೈಹಿಕ ಸದೃಢತೆ ಹಾಗೂ ಸಮತೋಲನಕ್ಕೆ ಯೋಗಾಭ್ಯಾಸ ಸಹಕಾರಿಯಾಗಿದೆ ಎಂದು ತಿಳಿಸಿದರು.

ಮಡಿಕೇರಿಯಲ್ಲಿ ನಡೆದ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ನಗರಸಭೆ ಅಧ್ಯಕ್ಷರಾದ ಪಿ.ಕಲಾವತಿ, ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕೆ ಯೋಗ ಸಹಕಾರಿಯಾಗಿದೆ ಎಂದರು.

---

ಶ್ರೀರಂಗಪಟ್ಟಣದ ಟಿಪ್ಪು ಸುಲ್ತಾನ ಬೇಸಿಗೆ ಅರಮನೆ ಆವರಣದಲ್ಲಿ ವಿಶೇಷ ಯೋಗ ದಿನಾಚರಣೆ ಆಚರಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಶಾಸಕ ರಮೇಶ್ ಬಂಡಿ ಸಿದ್ದೇಗೌಡ, ಕ್ರಮಬದ್ಧ ರೀತಿಯಲ್ಲಿ ಯೋಗ ಮಾಡುವುದರಿಂದ ನಮ್ಮ ಮನಸ್ಸನ್ನು ಹತೋಟಿಯಲ್ಲಿಟ್ಟುಕೊಳ್ಳಬಹುದು. ದೈಹಿಕ ಸಮಸ್ಯೆಗಳು ದೂರವಾಗಿ ನೆನಪಿನ ಶಕ್ತಿ ಹೆಚ್ಚುತ್ತದೆ ಎಂದರು.

---

ರಾಜ್ಯದಲ್ಲಿ ಮುಂಗಾರು ಕ್ಷೀಣಿಸಿದ್ದು, ಕಾವೇರಿ ವಿಚಾರದಲ್ಲಿ ತಮಿಳುನಾಡು ಮತ್ತೆ ವಿವಾದ ಮಾಡುತ್ತಿರುವುದು ಸರಿಯಲ್ಲ ಎಂದು ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಹೇಳಿದ್ದಾರೆ.

ಮಂಡ್ಯದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮಿಳುನಾಡಿಗೆ ನಿಗದಿಗಿಂತ ಎರಡು ಪಟ್ಟು ನೀರು ನೀಡಲಾಗಿದೆ. ಆದಾಗ್ಯು ಈಗ ಮಳೆ ಕೊರತೆಯಿರುವ ಸಂದರ್ಭದಲ್ಲಿ ನೀರಿಗಾಗಿ ಒತ್ತಡ ಹೇರುವುದು ಸೂಕ್ತವಲ್ಲ ಎಂದರು.

ಬೆಂಗಳೂರಿನ ಕುಡಿಯುವ ನೀರಿಗಾಗಿ ಮೇಕೆದಾಟು ಯೋಜನೆ ಅಗತ್ಯವಾಗಿದೆ. ಈ ಯೋಜನೆ ಅನುಷ್ಠಾನವಾದರೆ ಎರಡೂ ರಾಜ್ಯಗಳಿಗೂ ಲಾಭವಾಗಲಿದೆ ಎಂದು ಅವರು ತಿಳಿಸಿದರು.

---

ಪ್ರತಿಷ್ಠಿತ ಪದ್ಮಶ್ರೀ ಪ್ರಶಸ್ತಿಗೆ ರಾಜ್ಯದ ಐವರು ಸಾಧಕರು ಭಾಜನರಾಗಿದ್ದು, ಇದೇ ೨೨ ಮಂಗಳವಾರ ದೆಹಲಿಯಲ್ಲಿ ನಡೆಯಲಿರುವ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.

ವೈದ್ಯಕೀಯ ಸೇವೆಗಾಗಿ ಡಾ.ಪ್ರಭಾಕರ್ ಕೋರೆ, ಶಿಕ್ಷಣ ತಂತ್ರಜ್ಞ ಶಶಿ ಶೇಖರ್ ವೆಂಪತಿ, ಹಿಮೋಫಿಲಿಯಾ ರೋಗಿಗಳಿಗೆ ಉಚಿತ ಚಿಕಿತ್ಸೆ ಸಿಗುವಂತೆ ಮಾಡಿದ ವೈದ್ಯ ಡಾ.ಸುರೇಶ್ ಹನಗವಾಡಿ, ಉದ್ಯಮಿ ಟಿ.ಟಿ.ಜಗನ್ನಾಥನ್, ಭಾರತೀಯ ರಕ್ಷಣಾ ವಲಯವನ್ನು ಸ್ವಾವಲಂಬಿಯಾಗಿಸಿದ ವಿಜ್ಞಾನಿ ಡಾ.ಶುಭಾ ವೆಂಕಟೇಶ್ ಅಯ್ಯಂಗಾರ್ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುವುದು.

---

ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧೆಡೆ ಇಂದು ನೀಟ್ -ಯುಜಿ ಮರು ಪರೀಕ್ಷೆ ಸುಗಮವಾಗಿ ನಡೆಯಿತು. ಬೆಂಗಳೂರಿನ ೬೮, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ೮, ಚಿಕ್ಕಬಳ್ಳಾಪುರ ಜಿಲ್ಲೆಯ ೬, ಹಾವೇರಿಯಲ್ಲಿ ೫ ಪರೀಕ್ಷಾ ಕೇಂದ್ರ ಸೇರಿದಂತೆ ಇತರೆಡೆ ಯಾವುದೇ ಲೋಪವಿಲ್ಲದಂತೆ ಮರು ಪರೀಕ್ಷೆ ನಡೆಯಿತು. ಪರೀಕ್ಷಾ ಕೇಂದ್ರಗಳಲ್ಲಿ ಬಿಗಿ ಬಂದೋಬಸ್ತ್ ಏರ್ಪಡಿಸಲಾಗಿತ್ತು.

ವಿದ್ಯಾರ್ಥಿಗಳಿಗೆ ಬಯೋಮೆಟ್ರಿಕ್ ಹಾಜರಾತಿ ಕಡ್ಡಾಯವಾಗಿತ್ತು. ಪರೀಕ್ಷಾ ಕೇಂದ್ರಗಳಲ್ಲಿ ವಿದ್ಯುತ್ ವ್ಯವಸ್ಥೆ, ಸಿ.ಸಿ ಕ್ಯಾಮೆರಾ ಅಳವಡಿಕೆ, ಆಂಬುಲೆನ್ಸ್ ಸೇವೆ, ಸ್ವಚ್ಛತೆ ಮತ್ತು ಪರೀಕ್ಷೆಗೆ ಹಾಜರಾಗುವ ವಿಶೇಷ ಚೇತನ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ವೀಲ್ ಚೇರ್ ವ್ಯವಸ್ಥೆಯನ್ನು ಆರೋಗ್ಯ ಘಟಕದಿಂದ ಕಲ್ಪಿಸಲಾಗಿತ್ತು.

---

ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷರಾಗಿ ಬಿಕೆ ಹರಿಪ್ರಸಾದ್ ಇಂದು ಅಧಿಕಾರ ಸ್ವೀಕರಿಸಿದರು. ನಗರದ ಅರಮನೆ ಮೈದಾನದಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ಕೆಪಿಸಿಸಿ ಅಧ್ಯಕ್ಷರಾಗಿದ್ದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಧಿಕಾರ ಹಸ್ತಾಂತರಿಸಿದರು.

ಈ ವೇಳೆ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ, ರಾಜ್ಯ ಕಾಂಗ್ರೆಸ್ ಉಸ್ತುವಾರಿ ಸುರ್ಜೇವಾಲ ಮತ್ತಿತರ ಹಲವು ಗಣ್ಯರು ಉಪಸ್ಥಿತರಿದ್ದರು.

ಬಳಿಕ ಮಾತನಾಡಿದ ಮಲ್ಲಿಕಾರ್ಜುನ ಖರ್ಗೆ, ಪಕ್ಷಕ್ಕೆ ಶ್ರಮಪಟ್ಟ ಪ್ರತಿ ನಾಯಕರಿಗೆ ಮುಂದೆ ಉತ್ತಮವಾದ ಭವಿಷ್ಯವಿದೆ ಎಂದರು.

---

ಚಿತ್ರದುರ್ಗದ ಶಿವಶರಣ ಮಾದಾರ ಚನ್ನಯ್ಯ ಗುರುಪೀಠದ ಪೀಠಾಧ್ಯಕ್ಷರಾದ ಡಾ.ಶ್ರೀ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ ಅವರನ್ನು ಪ್ರತಿಷ್ಠಿತ ನಾಡಪ್ರಭು ಕೆಂಪೇಗೌಡ ರಾಷ್ಟ್ರೀಯ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

__________ ಮುಕ್ತಾಯ __________